# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 511 (545)

ವಿಧಾನ ಪರಿಷತ್ ಸದಸ್ಯರ ಹೆಸರು : ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ
(ನಾಮನಿರ್ದೇಶನ ಹೊಂದಿದವರು)

ಉತ್ತರಿಸುವ ಸಚಿವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

ಉತ್ತರಿಸುವ ದಿನಾಂಕ : 11.03.2025

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಮಲೆನಾಡು ಜಿಲ್ಲೆಗಳಿಗೆ ಕೈಗಾರಿಕೆಗಳನ್ನು ತರುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಕಳೆದ 2 ವರ್ಷಗಳಲ್ಲಿ ಎಷ್ಟು ಕೈಗಾರಿಕೆಗಳನ್ನು ಮಲೆನಾಡಿನಲ್ಲಿ ಸ್ಥಾಪಿಸಲಾಗಿದೆ ಮತ್ತು ಎಷ್ಟು ಉದ್ಯೋಗಗಳನ್ನು ಸೃಷ್ಟಿಸಲಾಗಿದೆ; (ಮಾಹಿತಿ ನೀಡುವುದು) | ರಾಜ್ಯದಲ್ಲಿ ಸಮಗ್ರ ಕೈಗಾರಿಕಾ ಬೆಳವಣಿಗೆ ಹಾಗೂ ಕೈಗಾರಿಕಾಭಿವೃದ್ಧಿಯಲ್ಲಿ ಹಿಂದುಳಿದ ತಾಲ್ಲೂಕುಗಳನ್ನು ವಲಯ-1 ರಡಿ ಪರಿಗಣಿಸಲಾಗಿದೆ. ಈ ವಲಯಕ್ಕೆ ಹೆಚ್ಚುವರಿ ರಿಯಾಯಿತಿ / ಪ್ರೋತ್ಸಾಹಗಳನ್ನು ನೀಡಿ ಸಮತೋಲನಾ ಕೈಗಾರಿಕಾಭಿವೃದ್ಧಿಗೆ ಉದ್ದೇಶಿಸಲಾಗಿದೆ.<br><br>ಈ ನಿಟ್ಟಿನಲ್ಲಿ ಕೈಗಾರಿಕಾ ನೀತಿ 2025-30, ಏರೋಸ್ಪೇಸ್ ನೀತಿ 2022-27 ಮತ್ತು ಕ್ಲೀನ್ ಮೋಬಿಲಿಟಿ ನೀತಿಗಳನ್ನು ಜಾರಿಗೆ ತರಲಾಗಿದೆ ಹಾಗೂ ಈ ಕೆಳಕಂಡ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ.<br><br>• ಕೈಗಾರಿಕೆಗಳನ್ನು ಪ್ರಾರಂಭಿಸಲು ಬೇಕಾಗಿರುವ ಭೂಮಿ ಖರೀದಿ ಪ್ರಕ್ರಿಯೆ ಸರಳೀಕರಣಗೊಳಿಸಲಾಗಿದೆ.<br>• ಕೈಗಾರಿಕೆಗಳನ್ನು ಪ್ರಾರಂಭಿಸಲು ಬೇಕಾಗಿರುವ ಕೆಲವು ಮುಖ್ಯ ಎನ್.ಒ.ಸಿ/ಒಪ್ಪಿಗೆಗಳನ್ನು ಸ್ವಯಂ ಘೋಷಣ ಪತ್ರದ ಆಧಾರದ ಮೇಲೆ ಪಡೆಯಲು ಮತ್ತು 3 ವರ್ಷಗಳವರೆಗೆ ವಿಸ್ತರಿಸಿ ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) ಅಧಿನಿಯಮ 2002 ಕ್ಕೆ ತಿದ್ದುಪಡಿ ತರಲಾಗಿದೆ.<br>• ದೇಶ ವಿದೇಶಗಳ ಹಲವಾರು ಪ್ರತಿಷ್ಠಿತ ಕಂಪನಿಗಳೊಂದಿಗೆ ಕರ್ನಾಟಕದಲ್ಲಿ ಬಂಡವಾಳ ಹೂಡಲು ಸರಣಿ ಸಭೆಗಳನ್ನು ನಡೆಲಾಗುತ್ತಿದೆ ಮತ್ತು ಶೀಘ್ರ ಅನುಷ್ಠಾನಕ್ಕಾಗಿ ಅನುಸರಣಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>ಮುಂದುವರೆದು, ಕಳೆದ 2 ವರ್ಷಗಳಲ್ಲಿ (2022 ರಿಂದ ಪ್ರಸ್ತುತದವರೆಗೆ) ಮಲೆನಾಡು ಜಿಲ್ಲೆಗಳಾದ ಚಿಕ್ಕಮಗಳೂರು, ಹಾಸನ, ಶಿವಮೊಗ್ಗ, ಚಾಮರಾಜನಗರ, ಕೊಡಗು, ಉಡುಪಿ, ದಕ್ಷಿಣ ಕನ್ನಡ ಹಾಗೂ ಉತ್ತರ ಕನ್ನಡ ಜಿಲ್ಲೆಗಳಲ್ಲಿ ರಾಜ್ಯಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿಗಳಲ್ಲಿ ಒಟ್ಟು 165 ಯೋಜನೆಗಳಿಗೆ ಅನುಮೋದನೆ ನೀಡಲಾಗಿದ್ದು, ಇವುಗಳಿಂದ ರೂ. 59,388 ಕೋಟಿ ಮೊತ್ತದ ಬಂಡವಾಳ ಹೂಡಿಕೆ ಮತ್ತು 23918 ಉದ್ಯೋಗಾವಕಾಶಗಳನ್ನು ನಿರೀಕ್ಷಿಸಲಾಗಿದೆ.<br><br>ಇವುಗಳ ಪೈಕಿ 5 ಯೋಜನೆಗಳು ಅನುಷ್ಠಾನಗೊಂಡಿದ್ದು, ಇವುಗಳಿಂದ ರೂ. 630 ಕೋಟಿ ಮೊತ್ತದ ಬಂಡವಾಳ ಹೂಡಿಕೆಯಾಗಿದೆ ಹಾಗೂ 998 ಉದ್ಯೋಗಾವಕಾಶ ಸೃಜನೆಯಾಗಿದೆ. |

| | | |
|---|---|---|
| ಆ | ಉತ್ತರ ಕನ್ನಡ ಜಿಲ್ಲೆಯಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; | ಸರ್ಕಾರದ ವತಿಯಿಂದ ಯಾವುದೇ ಕೈಗಾರಿಕೆಯನ್ನು ನೇರವಾ ಸ್ಥಾಪಿಸುವುದಿಲ್ಲ. ಆದಾಗ್ಯೂ, ಖಾಸಗಿ ಕೈಗಾರಿಕೆಗಳನ್ನು ಸ್ಥಾಪಿಸಲು ಅಗತ್ಯ ಬೆಂಬಲ ಸೇವೆಯನ್ನು ಇಲಾಖೆಯಿಂದ ನೀಡಲಾಗುತ್ತದೆ. |
| ಇ | ಇದ್ದಲ್ಲಿ, ಸ್ಥಾಪಿಸಲು ಉದ್ದೇಶಿಸಿರುವ ಕೈಗಾರಿಕೆಗಳು ಯಾವುವು? (ಮಾಹಿತಿ ನೀಡುವುದು) | ಮುಂದುವರೆದಂತೆ, ಸರ್ಕಾರವು ಕೈಗಾರಿಕಾ ಅಭಿವೃದ್ಧಿಗಾಗಿ ಕೈಗಾರಿಕಾ ನೀತಿ 2025-30ರಡಿ ಈ ಕೆಳಕಂಡಂತೆ ರಿಯಾಯಿತಿ ಮತ್ತು ಪ್ರೋತ್ಸಾಹಗಳನ್ನು ನೀಡಿ ಉತ್ತೇಜಿಸಲಾಗುವುದು.<br>➢ ಬಂಡವಾಳ ಹೂಡಿಕೆ ಸಹಾಯಧನ/ ವಹಿವಾಟು ಆಧಾರಿತ ಹೂಡಿಕೆ ಸಹಾಯಧನ.<br>➢ ಮುದ್ರಾಂಕ ಶುಲ್ಕ ವಿನಾಯಿತಿ ಹಾಗೂ ನೋಂದಣಿ ಶುಲ್ಕ ರಿಯಾಯಿತಿ.<br>➢ ಭೂ ಪರಿವರ್ತನಾ ಶುಲ್ಕ ಮರುಪಾವತಿ.<br>➢ ವಿದ್ಯುತ್ ಶುಲ್ಕದಮೇಲಿನ ತೆರಿಗೆ ವಿನಾಯಿತಿ.<br>➢ ತಂತ್ರಜ್ಞಾನ ಅಳವಡಿಕೆ & ನವೋನ್ವೇಶಣೆ ಉತ್ತೇಜನ.<br>➢ ರಫ್ತು ಘಟಕಗಳಿಗೆ ಪ್ರೋತ್ಸಾಹ.<br>➢ ಸುಸ್ಥಿರತೆ & ಜವಾಬ್ದಾರಿಯುತ ಕೈಗಾರಿಕೀರಣ ಉತ್ತೇಜನ.<br>➢ ಲಾಜಿಸ್ಟಿಕ್ಸ್ & ಉಗ್ರಾಣ ಸಹಾಯಧನ. |

**ಸಿಐ 67 ಎಸ್‌ಪಿಐ 2025**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು